ಶ್ರೀ ಬಿ. ರಮಾನಾಥ್ ರೈ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಹೌದು.

ಆ) ಸಿಬ್ಬಂದಿಗಳ ಕೊರತೆ ನಿವಾರಣೆ ಮಾಡುವ ಕುರಿತು ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ವನ್ಯಜೀವಿಗಳಿಗೆ ಕುಡಿಯುವ ನೀರಿನ ಸಮಸ್ಯೆ ನಿವಾರಿಸುವುದಕ್ಕಾಗಿ ಅರಣ್ಯ ಪ್ರದೇಶದಲ್ಲಿ ಮಳೆ ನೀರಿನ ಸಂಗ್ರಹಣೆಗಾಗಿ ಇರುವ ಕೆರೆಗಳ ಹೂಳೆತ್ತುವಿಕೆ, ನಾಲಾ ಬದುಗಳ ನಿರ್ಮಾಣ ಮಾಡಿ ನೀರು ಸಂಗ್ರಹಣೆ ಮತ್ತು ಅಂತರ್ಜಲ ಹೆಚ್ಚಳಕ್ಕಾಗಿ ಇಂಗು ಗುಂಡಿಗಳು, ಗಲ್ಲಿ ಚೆಕ್ಸ್ ಮುಂತಾದ ಮಣ್ಣು ಮತ್ತು ನೀರು ಸಂರಕ್ಷಣಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

371 – ಜೆ ಅರ್ಹತಾ ಪತ್ರ ಪಡೆಯಲು ಉಂಟಾಗಿರುವ ತೊಂದರೆ

370(600); ಶ್ರೀ ಈಶ್ವರ ಭೀಮಣ್ಣ ಖಂಡ್ರೆ [ಭಾಲ್ಕಿ] ವಿಧಾನ ಸಭಾ ಸದಸ್ಯರು

ಅ) ಬೀದರ್ ಜಿಲ್ಲೆಯ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು 371–ಜೆ ಅರ್ಹತಾ ಪ್ರಮಾಣ ಪತ್ರ ಪಡೆಯಲು ಸಾಕಷ್ಟು ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಅರ್ಹತಾ ಪ್ರಮಾಣ ಪತ್ರ ನೀಡಲು ಪ್ರತ್ಯೇಕ ವಿಭಾಗ ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು)

ಅ) ಹೌದು.

ಸರ್ಕಾರದ ಮಾರ್ಗಸೂಚಿಯಂತೆ ಸಾರ್ವಜನಿಕರಿಂದ ಹಾಗೂ ವಿದ್ಯಾರ್ಥಿಗಳಿಂದ ಅರ್ಜಿ ಸ್ವೀಕರಿಸಿದ 24 ಗಂಟೆಗಳೊಳಗಾಗಿ ಅವಶ್ಯಕತೆಗೆ ಅನುಗುಣವಾಗಿ ಆದ್ಯತೆಯ ಮೇರೆಗೆ 371–ಜೆ ರಡಿ ಅರ್ಹತಾ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆ.

ಆ) ಕರ್ನಾಟಕ ಲೋಕಸೇವಾ ಆಯೋಗದಿಂದ ವಿವಿಧ ವೃಂದಗಳಿಗೆ ನೇರನೇಮಕಾತಿ ಪ್ರಕ್ರಿಯೆಯು ಸ್ಥಗಿತಗೊಂಡಿರುವುದರಿಂದ ಸಿಬ್ಬಂದಿಗಳ ಕೊರತೆ ಇದ್ದಾಗ್ಯೂ ಪ್ರಮಾಣ ಪತ್ರ ವಿತರಿಸುವ ಸಂದರ್ಭದಲ್ಲಿ ಆಗುವ ವಿಳಂಬವನ್ನು ತಪ್ಪಿಸಲು ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹೆಚ್ಚುವರಿಯಾಗಿ ಈ ಕಾರ್ಯವನ್ನು ನಿರ್ವಹಿಸಲು ಜಿಲ್ಲಾಧಿಕಾರಿಗಳು ಅಗತ್ಯ ಕ್ರಮ ಕೈಗೊಂಡಿರುತ್ತಾರೆ.

ಅರ್ಹತಾ ಪ್ರಮಾಣ ಪತ್ರ ನೀಡುವ ಬಗ್ಗೆ ಪ್ರತ್ಯೇಕ ವಿಭಾಗ ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ವಿಧವಾ ವೇತನ ಬಿಡುಗಡೆ ಮಾಡುವುದು

371(601); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕಿನಲ್ಲಿ ರಾಷ್ಟ್ರೀಯ ಭದ್ರತಾ ಯೋಜನೆಯಡಿಯಲ್ಲಿ ಬಡತನ ರೇಖೆಗಿಂತ ಕೆಳಗಿರುವ ವಿಧವೆಯರಿಗೆ ಎಷ್ಟು ದಿನಗಳಿಂದ ವಿಧವಾ ವೇತನ ಬಿಡುಗಡೆಯಾಗಬೇಕಾಗಿದೆ;

ಆ) ಬಾಕಿ ಇರುವ ವಿಧವಾ ವೇತನವನ್ನು ಬಿಡುಗಡೆಗೊಳಿಸಲು ತಕ್ಷಣವೆ ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಶ್ರೀನಿವಾಸ್ ಪ್ರಸಾದ್ (ಕಂದಾಯ ಸಚಿವರು)

ಅ) ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನಲ್ಲಿ ಮೇ 2014 ನೇ ತಿಂಗಳಿನವರೆಗೂ ಒಟ್ಟು 6017 ವಿಧವೆಯರಿಗೆ ವಿಧವಾ ವೇತನ ಪಿಂಚಣಿ ಹಣ ಖಜಾನೆಯಿಂದ ಪಾವತಿಯಾಗುತ್ತಿದೆ.

ಪ್ರಸ್ತುತ ಮಾಹೆಯ ಅಂತ್ಯಕ್ಕೆ 38 ವಿಧವಾ ವೇತನ ಫಲಾನುಭವಿಗಳಿಗೆ ಮಾಸಾಶನ ಬಿಡುಗಡೆ ಮಾಡಲು ಉಪ ಖಜಾನಾಧಿಕಾರಿಗಳು, ಭಾಲ್ಕಿ ರವರಿಗೆ ಆದೇಶ ಪ್ರತಿಗಳನ್ನು ಕಳುಹಿಸಬೇಕಾಗಿರುತ್ತದೆ.